# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 761 |
| ಮಾನ್ಯ ಸದಸ್ಯರ ಹೆಸರು: | ಶ್ರೀ ಪ್ರದೀಪ್ ಶೆಟ್ಟರ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 21.08.2026 |
| ಉತ್ತರಿಸುವ ಸಚಿವರು: | ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

<table>
<tr><th>ಕ್ರ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಇದಕ್ಕೆ ಎಷ್ಟು ಮೊತ್ತ ಮೀಸಲಿಟ್ಟಿದೆ ಹಾಗೂ ಯಾವ ಕಾಲಮಿತಿಯಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸಲಾಗುವುದು;</td><td>ಹೌದು.<br><br>2026-27ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ -151 ರನ್ವಯ ದಾವಣಗೆರೆ ತಾಲ್ಲೂಕಿನ ಮಾಯಕೊಂಡ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.<br><br>ಉಳಿದಂತೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಸ್ವೀಕೃತವಾಗುತ್ತಿರುವ ಪ್ರಸ್ತಾವನೆಗಳನ್ನು IPHS (Indian Public Health Standards) 2022 ರ ಮಾರ್ಗಸೂಚಿಗಳನ್ವಯ ಹಾಗೂ ಆದೇಶ ಸಂಖ್ಯೆ: ಆಕುಕ / 381 / ಸಿಜಿಎಂ / 2025, ದಿನಾಂಕ: 03.10.2025 ರಲ್ಲಿ ನಿಗದಿಪಡಿಸಲಾಗಿರುವ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.<br><br>2026-27 ನೇ ಸಾಲಿನ ಆಯವ್ಯಯದಲ್ಲಿ ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ (ಆರೋಗ್ಯ ಸಂಸ್ಥೆಗಳ ಕಟ್ಟಡ ನಿರ್ವಹಣೆ / ದುರಸ್ತಿ 2210-01-110-1-21, ಆಸ್ಪತ್ರೆ ನಿರ್ಮಾಣ ಹಾಗೂ ಉನ್ನತೀಕರಣ 4210-01-110-1-01 ಮತ್ತು ಆಸ್ಪತ್ರೆಗಳ ನಿರ್ಮಾಣ- ನಬಾರ್ಡ್ 4210-01-110-1-19) ಒದಗಿಸಿರುವ ರೂ.90000.00 ಲಕ್ಷಗಳ ಅನುದಾನದಲ್ಲಿ ಮುಂದುವರೆದ ಕಾಮಗಾರಿಗಳಿಗೆ ಅನುದಾನವನ್ನು ನಿಗಧಿಪಡಿಸಿದ ನಂತರ, ಉಳಿದ ಅನುದಾನದಡಿ ಹೊಸ ಕಾಮಗಾರಿಗಳನ್ನು ಸೇರ್ಪಡಿಸಿಕೊಂಡು ಕ್ರಿಯಾ ಯೋಜನೆಯನ್ನು ತಯಾರಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಹಾಗೂ ಆದ್ಯತೆ ಮೇರೆಗೆ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ.</td></tr>
<tr><td>(ಆ)</td><td>ಧಾರವಾಡ ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)</td><td>ಧಾರವಾಡ ಜಿಲ್ಲೆಯಲ್ಲಿ ಆಸ್ಪತ್ರೆಗಳ ಸಂಖ್ಯೆ ಕೆಳಕಂಡಂತೆ ನೀಡಲಾಗಿದೆ.
<table>
<tr><th>ಆಸ್ಪತ್ರೆ</th><th>ಸಂಖ್ಯೆ</th></tr>
<tr><td>ಪ್ರಾಥಮಿಕ ಆರೋಗ್ಯ ಕೇಂದ್ರಗಳು</td><td>43</td></tr>
<tr><td>ಸಮುದಾಯ ಆರೋಗ್ಯ ಕೇಂದ್ರಗಳು<br>(ಮಂಜೂರಾಗಿದ್ದು ಕಾರ್ಯಗತಗೊಳಿಸುವ ಹಂತದಲ್ಲಿದೆ)</td><td>03</td></tr>
<tr><td>ತಾಲ್ಲೂಕು ಆಸ್ಪತ್ರೆಗಳು</td><td>03</td></tr>
</table>
ಧಾರವಾಡ ಜಿಲ್ಲೆಯಲ್ಲಿ ವಿಧಾನಸಭಾವಾರು ಆಸ್ಪತ್ರೆಗಳ ಸಂಖ್ಯೆ ಕೆಳಕಂಡಂತೆ ನೀಡಲಾಗಿದೆ.
<table>
<tr><th>ವಿಧಾನಸಭಾ ಕ್ಷೇತ್ರ</th><th>PHC</th><th>CHC</th><th>TH</th></tr>
<tr><td>ಧಾರವಾಡ ವಿಧಾನ ಸಭಾ ಕ್ಷೇತ್ರ</td><td>06</td><td>01</td><td>-</td></tr>
<tr><td>ಹುಬ್ಬಳ್ಳಿ ವಿಧಾನ ಸಭಾ ಕ್ಷೇತ್ರ</td><td>03</td><td>-</td><td>-</td></tr>
</table></td></tr>
</table>

| | | | |
|---|---|---|---|
| ಕಲಘಟಗಿ ವಿಧಾನಸಭಾ ಕ್ಷೇತ್ರ | 07 | 01 | 01 |
| ಕುಂದಗೋಳ ವಿಧಾನಸಭಾ ಕ್ಷೇತ್ರ | 06 | - | 01 |
| ನವಲಗುಂದ ವಿಧಾನಸಭಾ ಕ್ಷೇತ್ರ | 08 | 01 | 01 |
| ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರ | 04 | - | - |
| ಹುಬ್ಬಳ್ಳಿ ಪೂರ್ವ ವಿಧಾನಸಭಾ ಕ್ಷೇತ್ರ | 03 | - | - |
| ಹುಬ್ಬಳ್ಳಿ ಪಶ್ಚಿಮ ವಿಧಾನಸಭಾ ಕ್ಷೇತ್ರ | 06 | - | - |
| **ಒಟ್ಟು** | **43** | **03** | **03** |

| | | |
|---|---|---|
| (ಇ) | ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ಹಾಗೂ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ಇಲ್ಲಿಯವರೆಗೆ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳೆಷ್ಟು; ಹಾಗೂ ಮೇಲ್ದರ್ಜೆಗೇರಿಸಲು ಅನುಸರಿಸುವ ಮಾನದಂಡಗಳೇನು; ಅವುಗಳ ವಿವರ ನೀಡುವುದು; | ಕಳೆದ ಮೂರು ವರ್ಷಗಳಲ್ಲಿ ಧಾರವಾಡ ಜಿಲ್ಲೆಯಲ್ಲಿ ಅಳ್ನಾವರ ತಾಲ್ಲೂಕಿನ ಅಳ್ನಾವರ ಹಾಗೂ ಅಣ್ಣಿಗೇರಿ ತಾಲೂಕಿನ ಅಣ್ಣಿಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಆದೇಶಿಸಲಾಗಿದೆ.<br><br>ಧಾರವಾಡ ಜಿಲ್ಲೆಯ ಕಲಘಟಗಿ ತಾಲ್ಲೂಕಿನ ಮಿಶ್ರಿಕೋಟಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಸ್ವೀಕೃತವಾದ ಪ್ರಸ್ತಾವನೆಯನ್ನು ಪರಿಶೀಲಿಸಿ, ನಿಯಮಾನುಸಾರ ಜನಸಂಖ್ಯೆಗನುಗುಣವಾಗಿ ಅರ್ಹತೆ ಇಲ್ಲದ ಕಾರಣ ಹಿಂಬರಹ ನೀಡಲಾಗಿದೆ.<br><br>ಜಿಲ್ಲಾ ಮಟ್ಟದಿಂದ ಜಿಲ್ಲೆಯಲ್ಲಿ ಕೊರತೆ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಜಿಲ್ಲಾ ಆಕುಕ ಅಧಿಕಾರಿಗಳು ಧಾರವಾಡ ಇವರಿಗೆ ಮಾಹಿತಿ ಕೋರಲಾಗಿದ್ದು, ಅವರಿಂದ ಮಾಹಿತಿ ನಿರೀಕ್ಷಿಸಲಾಗುತ್ತಿದೆ.<br><br>IPHS (Indian Public Health Standards) 2022 ರ ಮಾರ್ಗಸೂಚಿಗಳನ್ವಯ ಸಮತಟ್ಟು ಪ್ರದೇಶದಲ್ಲಿ 1,20,000 ಜನಸಂಖ್ಯೆಗೆ ಹಾಗೂ ಗುಡ್ಡಗಾಡು ಮತ್ತು ಗಿರಿಜನ ಪ್ರದೇಶದಲ್ಲಿ 80,000 ಜನಸಂಖ್ಯೆಗೆ ಒಂದು ಸಮುದಾಯ ಆರೋಗ್ಯ ಕೇಂದ್ರ ಸ್ಥಾಪಿಸಲು ಅವಕಾಶವಿರುತ್ತದೆ. ಇದಲ್ಲದೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಹಾಗೂ ಮೇಲ್ದರ್ಜೆಗೇರಿಸಲು ಆದೇಶ ಸಂಖ್ಯೆ: ಆಕುಕ / 381 / ಸಿಜಿಎಂ / 2025, ದಿನಾಂಕ: 03.10.2025 ರಲ್ಲಿ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿರುತ್ತದೆ. ಈ ಆದೇಶದ ಕ್ರಮ ಸಂಖ್ಯೆ: 02ರಲ್ಲಿ "ಪ್ರಸ್ತಾವಿತ CHC ಸ್ಥಳದಿಂದ 30 ಕಿ.ಮೀ ಅಥವಾ ಒಂದು ಗಂಟೆಯ ಪ್ರಯಾಣದ ಸಮಯದ ಒಳಗೆ ಯಾವುದೇ CHC ಅಥವಾ ಉನ್ನತ ಮಟ್ಟದ ಆರೋಗ್ಯ ಸೌಲಭ್ಯ (CHC/TH/DH) ಇರಬಾರದು" ಎಂದು ಸೂಚಿಸಲಾಗಿದೆ. |

(ಯು.ಟಿ. ಖಾದರ್ ಫರೀದ್)

ಆಕುಕ 100 ಎಸ್‌ಬಿವಿ 2026

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು